# ಅಕ್ರಮ ಅಕ್ಕಿ ಸಾಗಾಣೆದಾರರಿಂದ ಹಣ ವಸೂಲಿ ಬಳ್ಳಾರಿ ಎಸ್‌ಪಿ ಗನ್‌ಮ್ಯಾನ್ ಬಂಧನ





**ಬಳ್ಳಾರಿ:** "ಬೇಲಿಯೇ ಎದ್ದು ಹೊಲ ಮೇಯ್ದಂತೆ" ಎನ್ನುವ ಮಾತಿಗೆ ಸಾಕ್ಷಿಯಾಗುವಂತಹ ಘಟನೆ ಬಳ್ಳಾರಿಯಲ್ಲಿ ಬೆಳಕಿಗೆ ಬಂದಿದ್ದು, ಪೊಲೀಸ್ ಇಲಾಖೆಯನ್ನೇ ಮುಜುಗರಕ್ಕೀಡು ಮಾಡಿದೆ. ಕಾನೂನು ಕಾಪಾಡಬೇಕಾದವರು ತಾವೇ ಕಾನೂನು ಉಲ್ಲಂಘನೆ ಮಾಡಿದರೆ ಪರಿಸ್ಥಿತಿ ಹೇಗಿರುತ್ತದೆ ಎಂಬುದಕ್ಕೆ ಈ ಪ್ರಕರಣ ಉದಾಹರಣೆಯಾಗಿದೆ. ಅಕ್ರಮ ಪಡಿತರ ಅಕ್ಕಿ ಸಾಗಾಣಿಕೆದಾರರನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳಬೇಕಿದ್ದ ಪೊಲೀಸ್ ಅಧಿಕಾರಿಯ ಗನ್‌ಮ್ಯಾನ್ ತಾನೇ ಅಕ್ರಮ ಹಣ ವಸೂಲಿ ಮಾಡಿದ ಆರೋಪದಲ್ಲಿ ಬಂಧನಕ್ಕೊಳಗಾಗಿರುವ ಘಟನೆ ರಾಜ್ಯ ಪೊಲೀಸ್ ವಲಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ.

ಬಳ್ಳಾರಿ ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿ ಸುಮನ್ ಡಿ. ಪೆನ್ನೇಕರ್ ಅವರ ಗನ್‌ಮ್ಯಾನ್ ಆಗಿ ಕೆಲಸ ಮಾಡುತ್ತಿದ್ದ ದೇವರಾಜ್ ಹಾಗೂ ಆತನ ಸಹಚರರನ್ನು ಪೊಲೀಸರು ಬಂಧಿಸಿದ್ದಾರೆ. ಅಕ್ರಮ ಪಡಿತರ ಅಕ್ಕಿ ಸಾಗಾಣೆದಾರರಿಂದ ಲಕ್ಷಾಂತರ ರೂಪಾಯಿ ಹಣ ವಸೂಲಿ ಮಾಡಿದ್ದ ಆರೋಪದಡಿ ಈ ಕ್ರಮ ಕೈಗೊಳ್ಳಲಾಗಿದೆ. ಈ ಘಟನೆ ಹೊರಬಿದ್ದ ಬಳಿಕ ಪೊಲೀಸ್ ಇಲಾಖೆಯ ಮೇಲಿನ ಸಾರ್ವಜನಿಕರ ನಂಬಿಕೆಗೆ ಧಕ್ಕೆಯಾಗಿದ್ದು, "ರಕ್ಷಕರೇ ಭಕ್ಷಕರಾದರೆ ಜನರು ಯಾರನ್ನು ನಂಬಬೇಕು?" ಎಂಬ ಪ್ರಶ್ನೆ ಕೇಳಿಬರುತ್ತಿದೆ.

ಮಾಹಿತಿಯ ಪ್ರಕಾರ, ಶರಭಯ್ಯ ಎಂಬ ಅಕ್ರಮ ಪಡಿತರ ಅಕ್ಕಿ ಸಾಗಾಣೆದಾರರಿಂದ ಸುಮಾರು 3 ಲಕ್ಷ ರೂಪಾಯಿ ಹಣವನ್ನು ದೇವರಾಜ್ ಮತ್ತು ಆತನ ತಂಡ ವಸೂಲಿ ಮಾಡಿತ್ತು ಎನ್ನಲಾಗಿದೆ. ಈ ಸಂಬಂಧ ಶರಭಯ್ಯ ಅವರು ಮೋಕಾ ಪೊಲೀಸ್ ಠಾಣೆಗೆ ದೂರು ನೀಡಿದ ಹಿನ್ನೆಲೆ ಪ್ರಕರಣ ಬೆಳಕಿಗೆ ಬಂದಿದೆ. ದೂರಿನ ಆಧಾರದ ಮೇಲೆ ತನಿಖೆ ಆರಂಭಿಸಿದ ಪೊಲೀಸರು ಇದೀಗ ಗನ್‌ಮ್ಯಾನ್ ದೇವರಾಜ್ ಸೇರಿದಂತೆ ಒಟ್ಟು ಮೂವರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ.

ಪೊಲೀಸರ ತನಿಖೆಯಲ್ಲಿ ಬಹಿರಂಗವಾಗಿರುವ ಮಾಹಿತಿಯಂತೆ, ಶರಭಯ್ಯ ಎಂಬುವವರು ಪಡಿತರ ಅಕ್ಕಿ ತುಂಬಿಕೊಂಡು ಎರಡು ಲಾರಿಗಳ ಮೂಲಕ ಆಂಧ್ರಪ್ರದೇಶದತ್ತ ಸಾಗಿಸುತ್ತಿದ್ದರು. ಇದೇ ವೇಳೆ ಆರೋಪಿಗಳು ತಮ್ಮನ್ನು "ಎಸ್‌ಪಿ ಸ್ಕ್ವಾಡ್" ಎಂದು ಹೇಳಿಕೊಂಡು ಲಾರಿಗಳನ್ನು ಮಧ್ಯದಲ್ಲಿ ಅಡ್ಡಗಟ್ಟಿದ್ದರು. ಬಳಿಕ ಅಕ್ರಮ ಸಾಗಾಣಿಕೆ ಪ್ರಕರಣ ದಾಖಲಿಸುವ ಬೆದರಿಕೆ ಹಾಕಿ, ಮೊದಲು 5 ಲಕ್ಷ ರೂಪಾಯಿ ಹಣಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ.

ನಂತರ ಮಾತುಕತೆ ನಡೆಸಿ ಸುಮಾರು 3 ಲಕ್ಷ ರೂಪಾಯಿ ಹಣ ವಸೂಲಿ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿದೆ. "ಹಣ ಕೊಡದಿದ್ದರೆ ಲಾರಿಗಳನ್ನು ಸೀಜ್ ಮಾಡಿ ಜೈಲಿಗೆ ಕಳಿಸುತ್ತೇವೆ" ಎಂದು ಬೆದರಿಕೆ ಹಾಕಲಾಗಿತ್ತು ಎಂದು ದೂರಿನಲ್ಲಿ ಉಲ್ಲೇಖಿಸಲಾಗಿಅದೆ. ಈ ಬೆದರಿಕೆಗೆ ಒಳಗಾದ ಶರಭಯ್ಯ ಬಳಿಕ ಪೊಲೀಸರನ್ನು ಸಂಪರ್ಕಿಸಿ ಸಂಪೂರ್ಣ ಮಾಹಿತಿಯನ್ನು ನೀಡಿದ್ದರು.

ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಬಳ್ಳಾರಿ ಪೊಲೀಸರು ತಕ್ಷಣ ತನಿಖೆ ಆರಂಭಿಸಿದ್ದು, ಆರೋಪಿಗಳ ವಿರುದ್ಧ ಸಾಕ್ಷ್ಯ ಸಂಗ್ರಹಣೆ ನಡೆಸಿದ್ದಾರೆ. ತನಿಖೆಯ ವೇಳೆ ಗನ್‌ಮ್ಯಾನ್ ದೇವರಾಜ್ ನಿಜವಾಗಿಯೂ "ಎಸ್‌ಪಿ ಸ್ಕ್ವಾಡ್" ಹೆಸರನ್ನು ದುರುಪಯೋಗಪಡಿಸಿಕೊಂಡು ಹಣ ವಸೂಲಿ ಮಾಡಿರುವುದು ಪ್ರಾಥಮಿಕವಾಗಿ ದೃಢಪಟ್ಟಿದೆ ಎಂದು ತಿಳಿದುಬಂದಿದೆ.

ಘಟನೆ ಹೊರಬಿದ್ದ ತಕ್ಷಣವೇ ಬಳ್ಳಾರಿ ಎಸ್‌ಪಿ ಸುಮನ್ ಡಿ. ಪೆನ್ನೇಕರ್ ಅವರು ಕಠಿಣ ನಿಲುವು ತಾಳಿದ್ದು, ತಮ್ಮದೇ ಗನ್‌ಮ್ಯಾನ್ ಆಗಿದ್ದ ದೇವರಾಜ್ ವಿರುದ್ಧ ಕ್ರಮ ಕೈಗೊಳ್ಳಲು ಆದೇಶಿಸಿದ್ದಾರೆ. ಬಳಿಕ ದೇವರಾಜ್ ಹಾಗೂ ಆತನ ಸಹಚರರನ್ನು ಬಂಧಿಸಿ ಮೋಕಾ ಪೊಲೀಸ್ ಠಾಣೆಗೆ ಕರೆತಂದು ವಿಚಾರಣೆ ನಡೆಸಲಾಗುತ್ತಿದೆ. ಪ್ರಕರಣದಲ್ಲಿ ಇನ್ನೂ ಯಾರಾದರೂ ಭಾಗಿಯಾಗಿದ್ದಾರೆಯೇ ಎಂಬುದರ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಈ ಪ್ರಕರಣ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಭಾರೀ ಸಂಚಲನ ಮೂಡಿಸಿದೆ. ಸಾಮಾನ್ಯವಾಗಿ ಅಕ್ರಮ ಪಡಿತರ ಅಕ್ಕಿ ಸಾಗಾಣಿಕೆ ವಿರುದ್ಧ ಕಾರ್ಯಾಚರಣೆ ನಡೆಸುವ ಪೊಲೀಸ್ ಸಿಬ್ಬಂದಿಯೇ ತಮ್ಮ ಅಧಿಕಾರದ ಹೆಸರಿನಲ್ಲಿ ಹಣ ವಸೂಲಿ ಮಾಡಿರುವ ಆರೋಪ ಎದುರಿಸುತ್ತಿರುವುದು ಇಲಾಖೆಯ ಗೌರವಕ್ಕೆ ಧಕ್ಕೆ ತಂದಿದೆ. ಪೊಲೀಸ್ ಇಲಾಖೆಯ ಒಳಗಿನ ಕೆಲವರ ವರ್ತನೆ ಇಡೀ ಇಲಾಖೆಯ ಪ್ರತಿಷ್ಠೆಗೆ ಮಸಿ ಬಳಿಯುವಂತಾಗಿದೆ ಎಂಬ ಮಾತುಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ.

ಸ್ಥಳೀಯರು ಕೂಡ ಈ ಪ್ರಕರಣದ ಕುರಿತು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. "ಅಕ್ರಮ ಕೆಲಸ ಮಾಡಿದವರನ್ನು ಬಂಧಿಸಬೇಕಾದವರೇ ಹಣಕ್ಕೆ ಬಲಿಯಾಗಿ ಕಾನೂನು ದುರುಪಯೋಗಪಡಿಸಿಕೊಂಡರೆ ಜನರು ನ್ಯಾಯಕ್ಕಾಗಿ ಯಾರನ್ನು ನಂಬಬೇಕು?" ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಮೂಡಿದೆ. ಪ್ರಕರಣದ ಸಂಪೂರ್ಣ ಸತ್ಯ ಹೊರಬರಬೇಕೆಂದು ಜನರು ಆಗ್ರಹಿಸಿದ್ದಾರೆ.

ಬಳ್ಳಾರಿಯಲ್ಲಿ ನಡೆದ ಈ ಘಟನೆ ಪೊಲೀಸ್ ಇಲಾಖೆಯ ಒಳಗಿನ ಭ್ರಷ್ಟಾಚಾರದ ಕುರಿತು ಮತ್ತೊಮ್ಮೆ ಚರ್ಚೆ ಹುಟ್ಟುಹಾಕಿದ್ದು, ಅಧಿಕಾರ ದುರುಪಯೋಗದ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂಬ ಒತ್ತಾಯ ಹೆಚ್ಚಾಗಿದೆ. ಪ್ರಕರಣದ ತನಿಖೆ ಮುಂದುವರಿದಿದ್ದು, ಇನ್ನಷ್ಟು ಮಾಹಿತಿ ಹೊರಬರುವ ಸಾಧ್ಯತೆ ಇದೆ.

# ರಸಗೊಬ್ಬರ ಕೃತಕ ಅಭಾವ ಸೃಷ್ಟಿಸಿದರೆ ಕ್ರಮ ಜಿಲ್ಲಾಧಿಕಾರಿ ಡಾ. ಕೆ.ಎನ್.ಅನುರಾಧ



**ಬೆಂಗಳೂರು ಗ್ರಾಮಾಂತರ:** 2026ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರೈತರಿಗೆ ರಸಗೊಬ್ಬರಗಳ ಕೊರತೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ಅವರು ಅಧಿಕಾರಿಗಳು, ರಸಗೊಬ್ಬರ ಉತ್ಪಾದಕ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಮಾರಾಟಗಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಮುಂಗಾರು ಹಂಗಾಮು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಕೃಷಿ ಚಟುವಟಿಕೆಗಳು ಚುರುಕುಗೊಳ್ಳುತ್ತಿರುವುದರಿಂದ, ರೈತರಿಗೆ ಸಮಯಕ್ಕೆ ಸರಿಯಾಗಿ ರಸಗೊಬ್ಬರ ಲಭ್ಯವಾಗುವಂತೆ ನೋಡಿಕೊಳ್ಳಬೇಕು ಎಂದು ಅವರು ಸ್ಪಷ್ಟವಾಗಿ ತಿಳಿಸಿದ್ದಾರೆ.

ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ನಡೆದ 2026–27ನೇ ಸಾಲಿನ ಕೃಷಿ ಪರಿಕರ ತಯಾರಕರ ಹಾಗೂ ಮಾರಾಟಗಾರರ ಜಿಲ್ಲಾ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ಕೆ. ಎನ್. ಅನುರಾಧ, "ಮುಂಗಾರು ಹಂಗಾಮು ರೈತರಿಗೆ ಅತ್ಯಂತ ಮಹತ್ವದ ಸಮಯ. ಈ ಅವಧಿಯಲ್ಲಿ ರಸಗೊಬ್ಬರಗಳ ಕೊರತೆ ಉಂಟಾದರೆ ರೈತರ ಕೃಷಿ ಚಟುವಟಿಕೆಗಳಿಗೆ ನೇರ ಪರಿಣಾಮ ಬೀರುತ್ತದೆ. ಹೀಗಾಗಿ ಉತ್ಪಾದನೆ, ಪೂರೈಕೆ ಹಾಗೂ ವಿತರಣೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಸಂಬಂಧಿಸಿದ ಎಲ್ಲಾ ಸಂಸ್ಥೆಗಳು ಮತ್ತು ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು" ಎಂದು ಸೂಚಿಸಿದರು.

ರೈತರಿಗೆ ರಸಗೊಬ್ಬರಗಳ ಲಭ್ಯತೆ ಕುರಿತು ಸರಿಯಾದ ಮಾಹಿತಿ ತಲುಪಿಸುವುದು ಕೂಡ ಅಗತ್ಯ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ರಸಗೊಬ್ಬರ ಮಾರಾಟ ಮಳಿಗೆಗಳ ಮುಂದೆ ದಾಸ್ತಾನು ಪ್ರಮಾಣ ಹಾಗೂ ಗರಿಷ್ಠ ಮಾರಾಟ ದರದ ವಿವರಗಳನ್ನು ಸಾರ್ವಜನಿಕರಿಗೆ ಸ್ಪಷ್ಟವಾಗಿ ಗೋಚರಿಸುವ ರೀತಿಯಲ್ಲಿ ಪ್ರದರ್ಶಿಸಬೇಕು ಎಂದು ಅವರು ಸೂಚಿಸಿದರು. ಇದ–ರಿಂದ ರೈತರಿಗೆ ಮೋಸವಾಗುವುದನ್ನು ತಡೆಯಲು ಸಹಾಯವಾಗುತ್ತದೆ ಹಾಗೂ ಕಾಳಸಂತೆ ನಿಯಂತ್ರಣಕ್ಕೂ ಸಹಾಯಕವಾಗುತ್ತದೆ ಎಂದು ಹೇಳಿದರು.

ಇದರ ಜೊತೆಗೆ, ರೈತರು ರಾಸಾಯನಿಕ ಗೊಬ್ಬರಗಳ ಮೇಲಿನ ಅವಲಂಬನೆ ಕಡಿಮೆ ಮಾಡಿಕೊಂಡು ಸಾವಯವ ಗೊಬ್ಬರಗಳ ಬಳಕೆಯನ್ನು ಹೆಚ್ಚಿಸಬೇಕೆಂಬ ಅರಿವು ಮೂಡಿಸುವ ಅಗತ್ಯವಿದೆ ಎಂದು ಜಿಲ್ಲಾಧಿಕಾ–ರಿಗಳು ಅಭಿಪ್ರಾಯಪಟ್ಟರು. "ಸಾವಯವ ಗೊಬ್ಬರಗಳ ಬಳಕೆಯಿಂದ ಮಣ್ಣಿನ ಫಲವತ್ತತೆ ಹೆಚ್ಚುತ್ತದೆ. ರೈತರಿಗೆ ಪರಿಸರ ಸ್ನೇಹಿ ಕೃಷಿಯ ಮಹತ್ವವನ್ನು ತಿಳಿಸಬೇಕು" ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಯೂರಿಯಾ ರಸಗೊಬ್ಬರ ಮಾರಾಟದಲ್ಲಿ ಪಾರದರ್ಶಕತೆ ಕಾಪಾಡುವ ಉದ್ದೇಶದಿಂದ ಎಲ್ಲಾ ಮಾರಾಟ ಮಳಿಗೆಗಳಲ್ಲಿ ಪಿಒಎಸ್ (POS) ಯಂತ್ರದ ಮೂಲಕವೇ ಕಡ್ಡಾಯವಾಗಿ ಮಾರಾಟ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಇದರ ಮೂಲಕ ರೈತರಿಗೆ ಸರಿಯಾದ ಪ್ರಮಾಣದಲ್ಲಿ ಗೊಬ್ಬರ ತಲುಪುವಂತೆ ನೋಡಿಕೊಳ್ಳಬಹುದಾಗಿದೆ ಎಂದು ಹೇಳಿದರು.

ಜಿಲ್ಲೆಗೆ ಸರಬರಾಜಾಗಿರುವ ರಸಗೊಬ್ಬರಗಳನ್ನು ಬೇರೆ ಜಿಲ್ಲೆಗಳಿಗೆ ಮಾರಾಟ ಮಾಡಬಾರದು ಎಂದು ಕೂಡ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು. "ಜಿಲ್ಲೆಗೆ ಮೀಸಲಾದ ರಸಗೊಬ್ಬರವನ್ನು ಬೇರೆಡೆಗೆ ಸಾಗಣೆ ಮಾಡಿದರೆ ಸ್ಥಳೀಯ ರೈತರಿಗೆ ಕೊರತೆ ಉಂಟಾಗುತ್ತದೆ. ಇದನ್ನು ಯಾವುದೇ ಕಾರಣಕ್ಕೂ ಸಹಿಸಲಾಗುವುದಿಲ್ಲ" ಎಂದು ಎಚ್ಚರಿಸಿದರು. ಜೊತೆಗೆ, ಅಧಿಕೃತ ಪರವಾನಗಿ ಇಲ್ಲದೆ ರಸಗೊಬ್ಬರ ದಾಸ್ತಾನು ಅಥವಾ ಮಾರಾಟ ನಡೆಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಯೂರಿಯಾ ಮಾರಾಟವನ್ನು ಕೆ–ಕಿಸಾನ್ ತಂತ್ರಾಂಶದ ಮೂಲಕ ಪರಿಣಾಮಕಾರಿಯಾಗಿ ನಡೆಸುವ ಉದ್ದೇಶದಿಂದ ಪ್ರತಿಯೊಂದು ತಾಲ್ಲೂಕಿನಲ್ಲೂ ಚಿಲ್ಲರೆ ರಸಗೊಬ್ಬರ ಮಾರಾಟಗಾರರಿಗೆ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲು ಸಹಾಯಕ ಕೃಷಿ ನಿರ್ದೇಶಕರಿಗೆ ಸೂಚಿಸಲಾಗಿದೆ. ಡಿಜಿಟಲ್ ವ್ಯವಸ್ಥೆಯ ಮೂಲಕ ಮಾರಾಟ ಪ್ರಕ್ರಿಯೆ ಸುಗಮಗೊಳ್ಳಲಿದ್ದು, ವಿತರಣೆಯ ಮೇಲ್ವಿಚಾರಣೆಯೂ ಸುಲಭವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸಭೆಯಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು ಮುಂಗಾರು ಹಂಗಾಮಿನ ಬಿತ್ತನೆ ಗುರಿ ಹಾಗೂ ರಸಗೊಬ್ಬರ ಬೇಡಿಕೆ ಕುರಿತು ವಿವರಗಳನ್ನು ಮಂಡಿಸಿದರು. ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ 69,291 ಹೆಕ್ಟೇರ್ ಆಹಾರಧಾನ್ಯ ಮತ್ತು 257 ಹೆಕ್ಟೇರ್ ಎಣ್ಣೆಕಾಳು ಸೇ–ರಿದಂತೆ ಒಟ್ಟು 69,548 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ ಎಂದು ತಿಳಿಸಲಾಯಿತು.

ಈ ಬಿತ್ತನೆ ಗುರಿಗೆ ಅನುಗುಣವಾಗಿ ಜಿಲ್ಲೆಗೆ ಅಗತ್ಯವಿರುವ ರಸಗೊಬ್ಬರಗಳ ಪ್ರಮಾಣವನ್ನು ಕೂಡ ಅಂದಾಜಿಸಲಾಗಿದೆ. ಮುಂಗಾರು ಹಂಗಾಮಿಗೆ ಒಟ್ಟು 36,169 ಮೆಟ್ರಿಕ್ ಟನ್ ರಸಗೊಬ್ಬರಗಳ ಬೇಡಿಕೆಯಿದ್ದು, ಅದರಲ್ಲಿ ಯೂರಿಯಾ 11,418 ಮೆಟ್ರಿಕ್ ಟನ್, ಡಿಎಪಿ 7,567 ಮೆಟ್ರಿಕ್ ಟನ್, ಎಂಒಪಿ 1,354 ಮೆಟ್ರಿಕ್ ಟನ್, ಎಸ್‌ಎಸ್‌ಪಿ 1,086 ಮೆಟ್ರಿಕ್ ಟನ್ ಹಾಗೂ ಕಾಂಪ್ಲೆಕ್ಸ್ ರಸಗೊಬ್ಬರಗಳು 14,744 ಮೆಟ್ರಿಕ್ ಟನ್ ಅಗತ್ಯವಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಪ್ರಸ್ತುತ ತಿಂಗಳಲ್ಲಿ ಮಾತ್ರವೇ 1,732 ಮೆಟ್ರಿಕ್ ಟನ್ ಡಿಎಪಿ, 1,327 ಮೆಟ್ರಿಕ್ ಟನ್ ಯೂ–ರಿಯಾ ಹಾಗೂ 2,303 ಮೆಟ್ರಿಕ್ ಟನ್ ಕಾಂಪ್ಲೆಕ್ಸ್ ರಸಗೊಬ್ಬರಗಳ ಬೇಡಿಕೆ ಇದೆ ಎಂದು ಜಂಟಿ ಕೃಷಿ ನಿರ್ದೇಶಕರು ಸಭೆಗೆ ತಿಳಿಸಿದರು. ಈ ಬೇಡಿಕೆಯನ್ನು ಪೂರೈಸಲು ಪ್ರಸ್ತುತ ಜಿಲ್ಲೆಯಲ್ಲಿ ಒಟ್ಟು 17,482 ಮೆಟ್ರಿಕ್ ಟನ್ ವಿವಿಧ ರಸಗೊಬ್ಬರಗಳ ದಾಸ್ತಾನು ಲಭ್ಯವಿದೆ ಎಂದು ಅವರು ಮಾಹಿತಿ ನೀಡಿದರು.

ಸಭೆಯಲ್ಲಿ ತೋಟಗಾರಿಕೆ ಇಲಾಖೆ, ರೇಷ್ಮೆ ಇಲಾಖೆ ಹಾಗೂ ಪಶುಸಂಗೋಪನೆ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು. ಜೊತೆಗೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಸಹಾಯಕ ಕೃಷಿ ನಿರ್ದೇಶಕರು, ರಸಗೊಬ್ಬರ ತಯಾರಿಕಾ ಕಂಪನಿಗಳ ಪ್ರತಿನಿಧಿಗಳು, ಸಗಟು ಹಾಗೂ ಚಿಲ್ಲರೆ ರಸಗೊಬ್ಬರ ಮಾರಾಟಗಾರರು ಉಪಸ್ಥಿತರಿದ್ದು, ಮುಂಗಾರು ಹಂಗಾಮಿನ ಸಿದ್ಧತೆ ಕುರಿತು ಚರ್ಚೆ ನಡೆಸಿದರು.

# ಮಠದ ಆಸ್ತಿ ಮಾರಾಟಕ್ಕೆ ಭಕ್ತರ ವಿರೋಧ ಸಂಧಾನ ಸಭೆಯಲ್ಲಿ ಸ್ವಾಮೀಜಿ ಒಪ್ಪಿಗೆ



**ಹುಬ್ಬಳ್ಳಿ:** ಧಾರವಾಡ ಜಿಲ್ಲೆಯ ಕುಂದಗೋಳ ಪಟ್ಟಣದಲ್ಲಿರುವ ಐತಿಹಾಸಿಕ ಹಾಗೂ ಧಾರ್ಮಿಕ ಮಹತ್ವ ಹೊಂದಿರುವ ಪಂಚಗ್ರಹ ಹಿರೇಮಠದ ಆಸ್ತಿ ವಿಚಾರ ಕಳೆದ ಒಂದು ತಿಂಗಳಿಂದ ಭಾರೀ ವಿವಾದಕ್ಕೆ ಕಾರಣವಾಗಿತ್ತು. ಮಠದ ಪೀಠಾಧಿಪತಿ ಹಾಗೂ ಭಕ್ತರ ನಡುವೆ ಉಂಟಾಗಿದ್ದ ಈ ಭಿನ್ನಾಭಿಪ್ರಾಯ ಇದೀಗ ಪಂಚಪೀಠದ ಜಗದ್ಗುರುಗಳ ಮಧ್ಯಸ್ಥಿಕೆಯಿಂದ ತಾತ್ಕಾಲಿಕವಾಗಿ ಅಂತ್ಯಗೊಂಡಿದೆ. ಮಠದ ಆಸ್ತಿಯನ್ನು ಸೈಟ್ ಮಾಡಿ ಮಾರಾಟ ಮಾಡಲು ಮುಂದಾಗಿದ್ದ ಸ್ವಾಮೀಜಿಯ ನಿರ್ಧಾರಕ್ಕೆ ಭಕ್ತರು ತೀವ್ರ ವಿರೋಧ ವ್ಯಕ್ತಪಡಿಸಿದ್ದ ಹಿನ್ನೆಲೆ, ಇಂದು ನಡೆದ ಮಹತ್ವದ ಸಭೆಯಲ್ಲಿ ಸ್ವಾಮೀಜಿಗಳು ಇನ್ನು ಮುಂದೆ ಮಠದ ಯಾವುದೇ ಆಸ್ತಿ ಮಾರಾಟ ಮಾಡುವುದಿಲ್ಲ ಎಂದು ಲಿಖಿತ ಭರವಸೆ ನೀಡಿರುವುದು ವಿವಾದಕ್ಕೆ ತೆರೆ ಎಳೆದಂತಾಗಿದೆ.

ಕುಂದಗೋಳ ಪಟ್ಟಣದ ಪಂಚಗ್ರಹ ಹಿರೇಮಠ ಈ ಭಾಗದ ಅತ್ಯಂತ ಹಳೆಯ ಹಾಗೂ ಪ್ರಸಿದ್ಧ ಮಠಗಳಲ್ಲಿ ಒಂದಾಗಿದೆ. ಅನೇಕ ದಶಕಗಳಿಂದ ಈ ಮಠ ಧಾರ್ಮಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ಸಾವಿರಾರು ಭಕ್ತರ ನಂಬಿಕೆಯ ಕೇಂದ್ರವಾಗಿತ್ತು. ಧಾರವಾಡ ಜಿಲ್ಲೆಯಷ್ಟೇ ಅಲ್ಲದೆ ಸುತ್ತಮುತ್ತಲಿನ ಹಲವು ಭಾಗಗಳಿಂದಲೂ ಭಕ್ತರು ಈ ಮಠಕ್ಕೆ ಆಗಮಿಸುತ್ತಿದ್ದು, ಮಠದ ಪೀಠಾಧಿಪತಿಗಳು ಭಕ್ತರ ಪ್ರೀತಿ ಹಾಗೂ ಗೌರವಕ್ಕೆ ಪಾತ್ರರಾಗಿದ್ದರು. ಆದರೆ ಇತ್ತೀಚೆಗೆ ಮಠದ ಆಸ್ತಿ ವಿಚಾರವೇ ಮಠದ ಆಡಳಿತ ಹಾಗೂ ಭಕ್ತರ ನಡುವಿನ ಸಂಘರ್ಷಕ್ಕೆ ಕಾರಣವಾಗಿತ್ತು.

ಮಾಹಿತಿಯ ಪ್ರಕಾರ, ಕುಂದಗೋಳ ಪಟ್ಟಣದ ಹೊರವಲಯದಲ್ಲಿರುವ ಮಠಕ್ಕೆ ಸೇರಿದ ಸುಮಾರು 53 ಎಕರೆ ಭೂಮಿಯನ್ನು ಎನ್‌ಎ ಮಾಡಿ ಸೈಟ್ ರೂಪದಲ್ಲಿ ಅಭಿವೃದ್ಧಿಪಡಿಸಿ ಮಾರಾಟ ಮಾಡಲು ಪಂಚಗ್ರಹ ಹಿರೇಮಠದ ಪೀಠಾಧಿಪತಿ ಶಿಥಿಕಂಠೇಶ್ವರ ಸ್ವಾಮೀಜಿ ಮುಂದಾಗಿದ್ದರು ಎನ್ನಲಾಗಿದೆ. ಈ ವಿಚಾರ ಕೆಲವು ಭಕ್ತರ ಗಮನಕ್ಕೆ ಬರುತ್ತಿದ್ದಂತೆಯೇ ಅವರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದರು. "ಮಠದ ಆಸ್ತಿ ಕೇವಲ ಸ್ವಾಮೀಜಿಗಳಿಗೆ ಸೇರಿದ ವೈಯಕ್ತಿಕ ಆಸ್ತಿ ಅಲ್ಲ. ಭಕ್ತರು ಮಠದ ಅಭಿವೃದ್ಧಿಗಾಗಿ ನೀಡಿರುವ ಆಸ್ತಿಯಾಗಿದೆ. ಅದನ್ನು ಮಾರಾಟ ಮಾಡುವ ಅಧಿಕಾರ ಯಾರಿಗೂ ಇಲ್ಲ" ಎಂದು ಭಕ್ತರು ವಾದಿಸಿದ್ದರು.

ಈ ವಿಚಾರದಲ್ಲಿ ಅಸಮಾಧಾನಗೊಂಡ ಕೆಲ ಭಕ್ತರು ಧಾರವಾಡ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ಮಠದ ಆಸ್ತಿ ಮಾರಾಟ ಪ್ರಕ್ರಿಯೆ ತಡೆಯುವಂತೆ ಮನವಿ ಸಲ್ಲಿಸಿದ್ದರು. ಮಠದ ಆಸ್ತಿ ಸಂರಕ್ಷಣೆ ಮಾಡಬೇಕು ಹಾಗೂ ಭಕ್ತರ ಭಾವನೆಗಳಿಗೆ ಧಕ್ಕೆ ಬಾರದಂತೆ ನೋಡಿಕೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದರು. ಇದೇ ವೇಳೆ, ಮಠದ ಆಸ್ತಿ ಮಾರಾಟಕ್ಕೆ ವಿರೋಧ ವ್ಯಕ್ತಪಡಿಸಿದ ಭಕ್ತರ ವಿರುದ್ಧ ಸ್ವಾಮೀಜಿಯವರೂ ತಿರುಗೇಟು ನೀಡಿದ್ದರು.

ಸ್ವಾಮೀಜಿ ಪರವಾಗಿ ಹೇಳಲಾಗಿದ್ದ ಮಾತುಗಳ ಪ್ರಕಾರ, ಪಂಚಗ್ರಹ ಹಿರೇಮಠವು ವಂಶ ಪಾರಂಪರ್ಯ ಮಠವಾಗಿದ್ದು, ಮಠದ ಆಸ್ತಿ ಪಿತ್ರಾರ್ಜಿತ ಸ್ವರೂಪದ್ದಾಗಿದೆ. "ಮಠದ ಅಭಿವೃದ್ಧಿ ಕಾರ್ಯಗಳಿಗೆ ಹಣದ ಅವಶ್ಯಕತೆ ಇರುವುದ–ರಿಂದ ಕೆಲವು ಜಾಗಗಳನ್ನು ಸೈಟ್ ಮಾಡಿ ಮಾರಾಟ ಮಾಡಲು ನಿರ್ಧರಿಸಲಾಗಿದೆ" ಎಂದು ಸ್ವಾಮೀಜಿಗಳು ಸಮರ್ಥಿಸಿಕೊಂಡಿದ್ದರು. ಆದರೆ ಈ ಸ್ಪಷ್ಟೀಕರಣ ಭಕ್ತರ ಅಸಮಾಧಾನವನ್ನು ಕಡಿಮೆ ಮಾಡಲಿಲ್ಲ. ವಿವಾದ ದಿನೇದಿನೇ ಹೆಚ್ಚಾಗುತ್ತಿದ್ದಂತೆ, ಕೆಲ ಭಕ್ತರು ಈ ವಿಚಾರವನ್ನು ಕಾಶಿ ಜಗದ್ಗುರುಗಳ ಗಮನಕ್ಕೂ ತಂದಿದ್ದರು.

ಪಂಚಗ್ರಹ ಹಿರೇಮಠವು ಕಾಶಿ ಜಗದ್ಗುರುಗಳ ಖಾಸಾ ಮಠವಾಗಿರುವ ಹಿನ್ನೆಲೆ, ಕಾಶಿ ಪೀಠದ ಗಮನಕ್ಕೆ ಈ ವಿವಾದವನ್ನು ಅಧಿಕೃತವಾಗಿ ತರಲಾಗಿತ್ತು. ಇದರ ಬೆನ್ನಲ್ಲೇ ಇಂದು ಕುಂದಗೋಳ ಪಟ್ಟಣದ ಪಂಚಗ್ರಹ ಹಿರೇಮಠದಲ್ಲಿ ಮಹತ್ವದ ಸಭೆ ಆಯೋಜಿಸಲಾಯಿತು. ಸಭೆಯಲ್ಲಿ ಕಾಶಿ ಜಗದ್ಗುರುಗಳು, ರಂಬಾಪುರಿ ಪೀಠದ ಜಗದ್ಗುರುಗಳು, ಮಠದ ಭಕ್ತರು, ಜನಪ್ರತಿನಿಧಿಗಳು, ಮುಖಂಡರು ಹಾಗೂ ಶಿಥಿಕಂಠೇಶ್ವರ ಸ್ವಾಮೀಜಿ ಭಾಗವಹಿಸಿದ್ದರು.

ಸಭೆಯ ವೇಳೆ ಮಾತನಾಡಿದ ಕಾಶಿ ಜಗದ್ಗುರುಗಳು, "ಪೀಠಾಧಿಪತಿಗಳನ್ನು ಮಠದ ಆಸ್ತಿ ಮಾರಾಟ ಮಾಡಲು ನೇಮಕ ಮಾಡಿಲ್ಲ. ಮಠದ ಆಸ್ತಿ ಕಾಶಿ ಪೀಠಕ್ಕೆ ಸೇರಿದ್ದು, ಅದನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಉಳಿಸುವ ಜವಾಬ್ದಾರಿ ಮಾತ್ರ ಪೀಠಾಧಿಪತಿಗಳದ್ದು" ಎಂದು ಸ್ಪಷ್ಟವಾಗಿ ಹೇಳಿದರು. ಅವರ ಈ ಮಾತು ಸಭೆಯಲ್ಲಿ ಭಾಗವಹಿಸಿದ್ದ ಭಕ್ತರಿಂದ ಭಾರೀ ಮೆಚ್ಚುಗೆಗೆ ಪಾತ್ರವಾಯಿತು.

ಇದೇ ವೇಳೆ ಅನೇಕ ಮುಖಂಡರು ಹಾಗೂ ಭಕ್ತರು ಪಂಚಪೀಠದ ಜಗದ್ಗುರುಗಳು ಕೈಗೊಳ್ಳುವ ತೀರ್ಮಾನಕ್ಕೆ ಬದ್ಧರಾಗಿರುವುದಾಗಿ ಹೇಳಿದರು. ವಿವಾದವನ್ನು ಶಾಂತಿಯುತವಾಗಿ ಅಂತ್ಯಗೊಳಿಸಬೇಕು ಹಾಗೂ ಮಠದ ಗೌರವ ಉಳಿಯಬೇಕು ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು.

ಸಭೆಯ ಕೊನೆಯಲ್ಲಿ ಮಾತನಾಡಿದ ಪಂಚಗ್ರಹ ಹಿರೇಮಠದ ಶಿಥಿಕಂಠೇಶ್ವರ ಸ್ವಾಮೀಜಿ, "ಇನ್ನು ಮುಂದೆ ಮಠದ ಯಾವುದೇ ಆಸ್ತಿಯನ್ನು ಮಾರಾಟ ಮಾಡುವುದಿಲ್ಲ. ಪಂಚಪೀಠದ ಜಗದ್ಗುರುಗಳು ನೀಡುವ ಮಾರ್ಗದರ್ಶನದಂತೆ ನಡೆದುಕೊಳ್ಳುತ್ತೇವೆ" ಎಂದು ಘೋಷಿಸಿದರು. ಇದಲ್ಲದೆ, ಭಕ್ತರ ಮನವಿಯ ಮೇರೆಗೆ ಆಸ್ತಿ ಮಾರಾಟ ಮಾಡದಿರಲು ಲಿಖಿತ ಭರವಸೆಯನ್ನೂ ನೀಡಿದ್ದಾರೆ ಎನ್ನಲಾಗಿದೆ.

ಕಳೆದ ಒಂದು ತಿಂಗಳಿಂದ ಆರೋಪ–ಪ್ರತ್ಯಾರೋಪ, ಅಸಮಾಧಾನ ಹಾಗೂ ಗೊಂದಲಕ್ಕೆ ಕಾರಣವಾಗಿದ್ದ ಪಂಚಗ್ರಹ ಹಿರೇಮಠದ ಆಸ್ತಿ ವಿವಾದಕ್ಕೆ ಇಂದಿನ ಸಭೆಯ ಮೂಲಕ ತಾತ್ಕಾಲಿಕ ತೆರೆ ಬಿದ್ದಂತಾಗಿದೆ. ಆದ–'ರೆ ಮುಂದಿನ ದಿನಗಳಲ್ಲಿ ಈ ಭರವಸೆ ಎಷ್ಟರ ಮಟ್ಟಿಗೆ ಜಾರಿಯಾಗುತ್ತದೆ ಹಾಗೂ ಮಠದ ಆಡಳಿತ ಹೇಗೆ ಸಾಗುತ್ತದೆ ಎಂಬುದರತ್ತ ಭಕ್ತರು ಮತ್ತು ಸ್ಥಳೀಯರ ಗಮನ ನೆಟ್ಟಿದೆ.

# ಬೆಲೆ ಏರಿಕೆಯ ನಡುವೆಯೂ ಮದ್ಯದ ಬೇಡಿಕೆ ಜೋರೇ ಜೋರು!

**ಬೆಂಗಳೂರು:** ಕರ್ನಾಟಕದಲ್ಲಿ 2026ರ ಏಪ್ರಿಲ್ ತಿಂಗಳು ಅಬಕಾರಿ ಇಲಾಖೆಯ ಇತಿಹಾಸದಲ್ಲೇ ಅತ್ಯಂತ ಮಹತ್ವದ ಹಾಗೂ ದಾಖಲೆ ಸೃಷ್ಟಿಸಿದ ತಿಂಗಳಾಗಿ ಗುರುತಿಸಿಕೊಂಡಿದೆ. ಮದ್ಯದ ಬೆಲೆ ಏರಿಕೆಯ ನಡುವೆಯೂ ರಾಜ್ಯದಲ್ಲಿ ಮದ್ಯದ ಬೇಡಿಕೆ ಕಡಿಮೆಯಾಗದೇ, ಬದಲಾಗಿ ಹೊಸ ಮಟ್ಟಕ್ಕೆ ಏರಿಕೆಯಾಗಿದೆ. ಕಳೆದ 13 ವರ್ಷಗಳಲ್ಲಿ ಕಾಣದ ಮಟ್ಟಿಗೆ ಮದ್ಯ ಮಾರಾಟ ದಾಖಲಾಗಿದ್ದು, ಇದರ ಪರಿಣಾಮವಾಗಿ ರಾಜ್ಯ ಸರ್ಕಾರದ ಬೊಕ್ಕಸಕ್ಕೂ ಸಾವಿರಾರು ಕೋಟಿ ರೂಪಾಯಿ ಆದಾಯ ಹರಿದುಬಂದಿದೆ. ಈ ಅಂಕಿಅಂಶಗಳು ಇದೀಗ ರಾಜಕೀಯ ಹಾಗೂ ಸಾಮಾಜಿಕ ವಲಯಗಳಲ್ಲಿಯೂ ದೊಡ್ಡ ಚರ್ಚೆಗೆ ಕಾರಣವಾಗಿವೆ.

ಅಬಕಾರಿ ಇಲಾಖೆ ಬಿಡುಗಡೆ ಮಾಡಿರುವ ಅಂಕಿಅಂಶಗಳ ಪ್ರಕಾರ, ಏಪ್ರಿಲ್ ತಿಂಗಳಲ್ಲಿ ರಾಜ್ಯದಾದ್ಯಂತ ಒಟ್ಟು 118.56 ಲಕ್ಷ ಬಾಕ್ಸ್ ಮದ್ಯ ಮಾರಾಟವಾಗಿದೆ. ಇದರಲ್ಲಿ ಭಾರತೀಯ ತಯಾರಿತ ವಿದೇಶಿ ಮದ್ಯ (ಐಎಂಎಲ್) 68.17 ಲಕ್ಷ ಬಾಕ್ಸ್ ಹಾಗೂ ಬಿಯರ್ 50.39 ಲಕ್ಷ ಬಾಕ್ಸ್ ಮಾರಾಟವಾಗಿದೆ. ಕಳೆದ ಹಲವು ವರ್ಷಗಳಲ್ಲಿಯೇ ಇಷ್ಟು ದೊಡ್ಡ ಪ್ರಮಾಣದಲ್ಲಿ ಮದ್ಯ ಮಾರಾಟವಾಗಿರುವುದು ಇದೇ ಮೊದಲು ಎಂದು ಇಲಾಖೆ ಮಾಹಿತಿ ನೀಡಿದೆ. ಒಂದು ಬಾಕ್ಸ್‌ಗೆ ಸರಾಸರಿ ಲೀಟರ್ ಪ್ರಮಾಣವನ್ನು ಲೆಕ್ಕ ಹಾಕಿದರೆ, ರಾಜ್ಯದಲ್ಲಿ ದಿನನಿತ್ಯ ಲಕ್ಷಾಂತರ ಲೀಟರ್ ಮದ್ಯ ವಹಿವಾಟು ನಡೆದಿರುವುದು ಸ್ಪಷ್ಟವಾಗುತ್ತದೆ. ವಿಶೇಷವಾಗಿ ಬೇಸಿಗೆ ಹವಾಮಾನ, ಚುನಾವಣಾ ಚಟುವಟಿಕೆಗಳು ಹಾಗೂ ಗಡಿ ರಾಜ್ಯಗಳಲ್ಲಿ ಜಾರಿಯಾಗಿದ್ದ ಮದ್ಯ ನಿಷೇಧಗಳು ಕರ್ನಾಟಕದ ಮಾರಾಟದ ಮೇಲೆ ನೇರ ಪರಿಣಾಮ ಬೀರಿವೆ ಎಂದು ಅಬಕಾರಿ ಇಲಾಖೆ ಅಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ.

ಈ ದಾಖಲೆ ಮಟ್ಟದ ಮಾರಾಟದಿಂದ ರಾಜ್ಯ ಸರ್ಕಾರಕ್ಕೆ ಭಾರೀ ಪ್ರಮಾಣದ ಆದಾಯ ಕೂಡ ಹರಿದುಬಂದಿದೆ. ಏಪ್ರಿಲ್ ತಿಂಗಳಲ್ಲಿ ಮಾತ್ರ ಅಬಕಾರಿ ಇಲಾಖೆಗೆ ಸುಮಾರು 3,688 ಕೋಟಿ ಆದಾಯ ಲಭಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇದು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಗಣನೀಯ ಪ್ರಮಾಣದ ಏರಿಕೆಯಾಗಿದೆ. 2025ರ ಏಪ್ರಿಲ್ ತಿಂಗಳಲ್ಲಿ ಸುಮಾರು 2,904 ಕೋಟಿ ಆದಾಯ ಸಂಗ್ರಹವಾಗಿದ್ದರೆ, ಈ ಬಾರಿ ಅದನ್ನು ಬಹಳ ಮಟ್ಟಿಗೆ ಮೀರಿಸಲಾಗಿದೆ. ಕೇವಲ ಒಂದು ವರ್ಷದ ಅವಧಿಯಲ್ಲಿ ಆದಾಯದಲ್ಲಿ ಭಾರೀ ಪ್ರಮಾಣದ ಹೆಚ್ಚಳ ದಾಖಲಾಗಿರುವುದು ಅಬಕಾರಿ ಇಲಾಖೆಗೆ ದೊಡ್ಡ ಸಾಧನೆಯಾಗಿ ಪರಿಗಣಿಸಲಾಗುತ್ತಿದೆ.

ಮದ್ಯ ಮಾರಾಟದ ಈ ಏರಿಕೆ ಕಳೆದ 13 ವರ್ಷಗಳ ದಾಖಲೆಗಳನ್ನು ಕೂಡ ಮುರಿದಿದೆ. 2013ರಿಂದ ಇಂದಿನವರೆಗೆ ಯಾವುದೇ ತಿಂಗಳಲ್ಲಿ ಇಷ್ಟೊಂದು ಪ್ರಮಾಣದ ಮದ್ಯ ಮಾರಾಟ ದಾಖಲಾಗಿರಲಿಲ್ಲ ಎಂದು ಅಬಕಾರಿ ಇಲಾಖೆ ತಿಳಿಸಿದೆ. ಇದುವರೆಗೆ ಅತಿ ಹೆಚ್ಚು ಮಾರಾಟ ದಾಖಲಾಗಿದ್ದದ್ದು 2023ರ ಜುಲೈ ತಿಂಗಳಲ್ಲಿ. ಆ ವೇಳೆ 66.22 ಲಕ್ಷ ಬಾಕ್ಸ್ ಐಎಂಎಲ್ ಮಾರಾಟವಾಗಿತ್ತು. ಆದರೆ ಈ ಬಾರಿ ಏಪ್ರಿಲ್‌ನಲ್ಲಿ 68.17 ಲಕ್ಷ ಬಾಕ್ಸ್ ಐಎಂಎಲ್ ಮಾರಾಟವಾಗುವ ಮೂಲಕ ಹಳೆಯ ದಾಖಲೆಯೂ ಮುರಿದಿದೆ.

ಬಿಯರ್ ಮಾರಾಟದಲ್ಲಿಯೂ ಗಣನೀಯ ಪ್ರಮಾಣದ ಏರಿಕೆ ಕಂಡುಬಂದಿದೆ. ಕಳೆದ ವರ್ಷ ಏಪ್ರಿಲ್‌ನಲ್ಲಿ ಸುಮಾರು 41.60 ಲಕ್ಷ ಬಾಕ್ಸ್ ಬಿಯರ್ ಮಾರಾಟವಾಗಿದ್ದರೆ, ಈ ಬಾರಿ ಅದು 50.39 ಲಕ್ಷ ಬಾಕ್ಸ್‌ಗೆ ಏರಿಕೆಯಾಗಿದೆ. ಅಂದರೆ, ಬಿಯರ್ ಮಾರಾಟದಲ್ಲಿ ಶೇ.21ಕ್ಕಿಂತ ಹೆಚ್ಚು ಬೆಳವಣಿಗೆ ಕಂಡುಬಂದಿದೆ. ಬೇಸಿಗೆಯ ತೀವ್ರತೆ ಹೆಚ್ಚಾಗಿದ್ದ ಕಾರಣ ಬಿಯರ್‌ಗೆ ಬೇಡಿಕೆ ಹೆಚ್ಚಾಗಿದೆ ಎಂಬ ಅಭಿಪ್ರಾಯವೂ ಕೇಳಿಬರುತ್ತಿದೆ. ಈ ಭಾರೀ ಪ್ರಮಾಣದ ಮದ್ಯ ಮಾರಾಟದ ಹಿಂದೆ ಹಲವು ಕಾರಣಗಳಿವೆ ಎಂದು ಅಬಕಾರಿ ಇಲಾಖೆ ಹಾಗೂ ಮಾರುಕಟ್ಟೆ ವಿಶ್ಲೇಷಕರು ಹೇಳುತ್ತಿದ್ದಾರೆ. ಪ್ರಮುಖ ಕಾರಣಗಳಲ್ಲಿ ಕೇರಳ ಹಾಗೂ ತಮಿಳುನಾಡು ರಾಜ್ಯಗಳಲ್ಲಿ ನಡೆದ ವಿಧಾನಸಭಾ ಚುನಾವಣೆಗಳು ಪ್ರಮುಖವಾಗಿವೆ. ಚುನಾವಣಾ ನೀತಿ ಸಂಹಿತೆ ಜಾರಿಯಾದ ಹಿನ್ನೆಲೆ ಆ ರಾಜ್ಯಗಳಲ್ಲಿ ಕೆಲ ದಿನಗಳ ಕಾಲ ಮದ್ಯ ಮಾರಾಟ ನಿಷೇಧಿಸಲಾಗಿತ್ತು. ಇದರ ಪರಿಣಾಮವಾಗಿ ಗಡಿ ಭಾಗದ ಜನರು ಕರ್ನಾಟಕದ ಮದ್ಯ ಅಂಗಡಿಗಳತ್ತ ಹರಿದು ಬಂದಿದ್ದಾರೆ ಎನ್ನಲಾಗಿದೆ.

ವಿಶೇಷವಾಗಿ ಕರ್ನಾಟಕ–ಕೇರಳ ಹಾಗೂ ಕರ್ನಾಟಕ–ತಮಿಳುನಾಡು ಗಡಿ ಭಾಗಗಳಲ್ಲಿ ಮದ್ಯ ಮಾರಾಟದಲ್ಲಿ ಅಸಾಮಾನ್ಯ ಏರಿಕೆ ದಾಖಲಾಗಿದೆ. ಬೇರೆ ರಾಜ್ಯಗಳಲ್ಲಿ ಮದ್ಯ ಲಭ್ಯವಿಲ್ಲದ ಕಾರಣ, ಹಲವರು ಕರ್ನಾಟಕಕ್ಕೆ ಬಂದು ದೊಡ್ಡ ಪ್ರಮಾಣದಲ್ಲಿ ಮದ್ಯ ಖರೀದಿಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಕೆಲವು ಕಡೆಗಳಲ್ಲಿ ಮದ್ಯದ ಅಂಗಡಿಗಳ ಮುಂದೆ ಉದ್ದ ಸಾಲುಗಳು ಕಂಡುಬಂದಿದ್ದವು ಎಂದು ಮೂಲಗಳು ತಿಳಿಸಿವೆ. ಇದರ ಜೊತೆಗೆ, ರಾಜ್ಯದ ಕೆಲವು ವಿಧಾನಸಭಾ ಕ್ಷೇತ್ರಗಳಲ್ಲಿ ನಡೆದ ಉಪಚುನಾವಣೆಗಳೂ ಮದ್ಯ ಮಾರಾಟ ಏರಿಕೆಗೆ ಕಾರಣವಾಗಿರಬಹುದು ಎಂಬ ಅಭಿಪ್ರಾಯವೂ ವ್ಯಕ್ತವಾಗಿದೆ. ಚುನಾವಣೆ ಸಮಯದಲ್ಲಿ ರಾಜಕೀಯ ಚಟುವಟಿಕೆಗಳು ಹೆಚ್ಚಾಗುವುದರಿಂದ ಮದ್ಯದ ಬೇಡಿಕೆಯೂ ಏರಿಕೆ ಕಾಣುವುದು ಸಾಮಾನ್ಯ ಸಂಗತಿ ಎಂದು ವಿಶ್ಲೇಷಕರು ಹೇಳುತ್ತಿದ್ದಾರೆ.

ಈ ದಾಖಲೆ ಮಟ್ಟದ ಮಾರಾಟದಿಂದ ಅಬಕಾರಿ ಇಲಾಖೆ ಮಾತ್ರವಲ್ಲದೆ ರಾಜ್ಯ ಸರ್ಕಾರಕ್ಕೂ ದೊಡ್ಡ ಮಟ್ಟದ ಹಣಕಾಸು ಲಾಭವಾಗಿದೆ. ಕರ್ನಾಟಕ ಸರ್ಕಾರದ ಆದಾಯದ ಪ್ರಮುಖ ಮೂಲಗಳಲ್ಲಿ ಅಬಕಾರಿ ತೆರಿಗೆ ಕೂಡ ಒಂದಾಗಿದ್ದು, ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳು, ಕಲ್ಯಾಣ ಕಾರ್ಯಕ್ರಮಗಳು ಹಾಗೂ ಮೂಲಸೌಕರ್ಯ ಕಾಮಗಾರಿಗಳಿಗೆ ಈ ಆದಾಯ ಮಹತ್ವದ ಪಾತ್ರ ವಹಿಸುತ್ತದೆ.

# ಐಪಿಎಲ್‌ನಲ್ಲಿ ಹನಿಟ್ರಾಪ್ ಭೀತಿ: ಆಟಗಾರರಿಗೆ ಬಿಸಿಸಿಐ ಹೈಅಲರ್ಟ್

**ನವದೆಹಲಿ:** ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಟೂರ್ನಿ ಮತ್ತೆ ಭದ್ರತಾ ಹಾಗೂ ಪಾರದರ್ಶಕತೆ ವಿಚಾರದಲ್ಲಿ ಗಂಭೀರ ಸವಾಲುಗಳನ್ನು ಎದುರಿಸುತ್ತಿರುವ ಆತಂಕಕಾರಿ ಮಾಹಿತಿ ಬೆಳಕಿಗೆ ಬಂದಿದೆ. ಈ ಹಿಂದೆ ಸ್ಪಾಟ್ ಫಿಕ್ಸಿಂಗ್ ಹಾಗೂ ಬೆಟ್ಟಿಂಗ್ ವಿವಾದಗಳಿಂದ ಕಂಗಾಲಾಗಿದ್ದ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ)ಗೆ ಇದೀಗ ಮತ್ತೊಂದು ದೊಡ್ಡ ತಲೆನೋವು ಎದುರಾಗಿದೆ. ಹನಿಟ್ರಾಪ್, ಲೈಂಗಿಕ ಕಿರುಕುಳ ಹಾಗೂ ರಹಸ್ಯ ಮಾಹಿತಿ ಸೋರಿಕೆಯಂತಹ ಅಪಾಯಗಳು ಐಪಿಎಲ್ ಆಟಗಾರರು ಮತ್ತು ತಂಡದ ಸಿಬ್ಬಂದಿಯನ್ನು ಗು–ರಿಯಾಗಿಸಿಕೊಂಡಿರುವ ಸಾಧ್ಯತೆಗಳ ಬಗ್ಗೆ ಬಿಸಿಸಿಐಗೆ ಮಹತ್ವದ ಮಾಹಿತಿ ತಲುಪಿದೆ ಎನ್ನಲಾಗಿದೆ.

ಮೂಲಗಳ ಪ್ರಕಾರ, ಕೆಲವು ಬುಕ್ಕಿಗಳು ಹಾಗೂ ಅನುಮಾನಾಸ್ಪದ ಜಾಲಗಳು ಸುಂದರ ಯುವತಿಯರನ್ನು ಬಳಸಿಕೊಂಡು ಆಟಗಾರರನ್ನು ಸಂಪರ್ಕಿಸುವ ಪ್ರಯತ್ನ ನಡೆಸುತ್ತಿರುವ ಮಾಹಿತಿ ಲಭ್ಯವಾಗಿದೆ. ವಿಶೇಷವಾಗಿ ಐಪಿಎಲ್ ಆಟಗಾರರು ತಂಗಿರುವ ಹೋಟೆಲ್‌ಗಳಿಗೆ ಯುವತಿಯರನ್ನು ಕಳುಹಿಸಿ, ಸ್ನೇಹ ಅಥವಾ ವೈಯಕ್ತಿಕ ಸಂಬಂಧ ಬೆಳೆಸುವ ಮೂಲಕ ಆಟಗಾರರಿಂದ ರಹಸ್ಯ ಮಾಹಿತಿಯನ್ನು ಪಡೆಯುವ ತಂತ್ರ ಬಳಕೆಯಾಗುತ್ತಿದೆ ಎಂಬ ಶಂಕೆ ವ್ಯಕ್ತವಾಗಿದೆ.

ಕೆಲ ಪ್ರಕರಣಗಳಲ್ಲಿ ಲೈಂಗಿಕ ಸಂಬಂಧದ ಹೆಸರಿನಲ್ಲಿ ಆಟಗಾರರನ್ನು ಬಲೆಗೆ ಬೀಳಿಸಿ, ಅವರ ಖಾಸಗಿ ಕ್ಷಣಗಳನ್ನು ರಹಸ್ಯವಾಗಿ ವಿಡಿಯೋ ಅಥವಾ ಫೋಟೋ ರೂಪದಲ್ಲಿ ದಾಖಲಿಸಿ ನಂತರ ಬೆದರಿಕೆ ಹಾಕುವ ಸಾಧ್ಯತೆಗಳ ಬಗ್ಗೆ ಬಿಸಿಸಿಐ ಎಚ್ಚರಿಕೆ ಪಡೆದಿದೆ. ಇಂತಹ ವಿಡಿಯೋಗಳನ್ನು ಬಳಸಿಕೊಂಡು ಮ್ಯಾಚ್ ಫಿಕ್ಸಿಂಗ್, ಸ್ಪಾಟ್ ಫಿಕ್ಸಿಂಗ್ ಅಥವಾ ತಂಡದ ಆಂತರಿಕ ಮಾಹಿತಿಯನ್ನು ಸೋರಿಕೆ ಮಾಡಿಸುವಂತಹ ಚಟುವಟಿಕೆಗಳಿಗೆ ಒತ್ತಡ ಹೇರುವ ಸಾಧ್ಯತೆ ಇದೆ ಎಂದು ವರದಿಗಳು ತಿಳಿಸಿವೆ.

ಸೋಶಿಯಲ್ ಮೀಡಿಯಾ ಮೂಲಕ ಪರಿಚಯವಾಗುವ ಅಪರಿಚಿತ ವ್ಯಕ್ತಿಗಳಿಂದ ಈ ರೀತಿಯ ಹನಿಟ್ರಾಪ್ ನಡೆಯುವ ಸಾಧ್ಯತೆಯನ್ನು ಬಿಸಿಸಿಐ ಗಂಭೀರವಾಗಿ ಪರಿಗಣಿಸಿದೆ. ಇನ್‌ಸ್ಟಾಗ್ರಾಮ್, ಫೇಸ್‌ಬುಕ್, ಸ್ನಾಪ್‌ಚಾಟ್ ಹಾಗೂ ಇತರೆ ಸಾಮಾಜಿಕ ಜಾಲತಾಣಗಳ ಮೂಲಕ ಆಟಗಾರರನ್ನು ಸಂಪರ್ಕಿಸಿ, ನಂತರ ವೈಯಕ್ತಿಕ ಭೇಟಿಗಳಿಗೆ ಆಹ್ವಾನಿಸುವಂತಹ ಪ್ರಯತ್ನಗಳು ನಡೆಯುತ್ತಿರುವ ಮಾಹಿತಿ ಲಭ್ಯವಾಗಿದೆ ಎನ್ನಲಾಗಿದೆ.

ಈ ಹಿನ್ನೆಲೆಯಲ್ಲಿ ಬಿಸಿಸಿಐ ತುರ್ತು ಕ್ರಮವಾಗಿ ಕಠಿಣ ಭದ್ರತಾ ಮಾರ್ಗಸೂಚಿಗಳನ್ನು ಜಾರಿಗೊಳಿಸಿದೆ. ಬಿಸಿಸಿಐ ಕಾರ್ಯದರ್ಶಿ ಆಜತಚಿರಿಣ ಖಚಿಣಇುಚಿ ಅವರು ಈ ಸಂಬಂಧ 7 ಪುಟಗಳ ವಿವರವಾದ ಭದ್ರತಾ ಮಾರ್ಗಸೂಚಿಯನ್ನು ಬಿಡುಗಡೆ ಮಾಡಿದ್ದಾರೆ. ಐಪಿಎಲ್ 2026ರ ಉಳಿದ ಪಂದ್ಯಗಳ ಅವಧಿಯಲ್ಲಿ ಎಲ್ಲಾ ಆಟಗಾರರು, ತಂಡದ ಸಿಬ್ಬಂದಿ ಹಾಗೂ ಫ್ರಾಂಚೈಸಿಗಳು ಈ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಸೂಚಿಸಲಾಗಿದೆ.

ಹೊಸ ಮಾರ್ಗಸೂಚಿಯ ಪ್ರಕಾರ, ಆಟಗಾರರು ತಂಗಿರುವ ಹೋಟೆಲ್ ಕೊಠಡಿಗಳಿಗೆ ಯಾವುದೇ ಅಪರಿಚಿತ ವ್ಯಕ್ತಿಗಳಿಗೆ ಪ್ರವೇಶ ನೀಡುವುದು ಸಂಪೂರ್ಣ ನಿಷೇಧಿಸಲಾಗಿದೆ. ಯಾರನ್ನಾದರೂ ಭೇಟಿಗೆ ಆಹ್ವಾನಿಸುವ ಮೊದಲು ಬಿಸಿಸಿಐ ಭದ್ರತಾ ಅಧಿಕಾರಿಗಳ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ. ಆಟಗಾರರು ಹಾಗೂ ಸಿಬ್ಬಂದಿ ವೈಯಕ್ತಿಕ ಪರಿಚಯದ ಹೆಸರಿನಲ್ಲಿ ಯಾರನ್ನೂ ನೇರವಾಗಿ ಕೊಠಡಿಗಳಿಗೆ ಕರೆಸಿಕೊಳ್ಳಬಾರದು ಎಂದು ಎಚ್ಚರಿಸಲಾಗಿದೆ.

ಇದರ ಜೊತೆಗೆ, ಸೋಶಿಯಲ್ ಮೀಡಿಯಾ ಮೂಲಕ ಪರಿಚಯವಾಗುವ ವ್ಯಕ್ತಿಗಳೊಂದಿಗೆ ವೈಯಕ್ತಿಕ ಮಾಹಿತಿ ಹಂಚಿಕೊಳ್ಳದಂತೆ ಆಟಗಾರರಿಗೆ ವಿಶೇಷ ಎಚ್ಚರಿಕೆ ನೀಡಲಾಗಿದೆ. ಮೊಬೈಲ್ ಸಂಖ್ಯೆ, ಪ್ರಯಾಣ ವಿವರಗಳು, ತಂಡದ ಆಂತರಿಕ ಮಾಹಿತಿ, ಅಭ್ಯಾಸ ವೇಳಾಪಟ್ಟಿ ಅಥವಾ ವೈಯಕ್ತಿಕ ಜೀವನಕ್ಕೆ ಸಂಬಂಧಿಸಿದ ಮಾಹಿತಿಗಳನ್ನು ಹಂಚಿಕೊಳ್ಳುವುದರಿಂದ ಭದ್ರತಾ ಅಪಾಯ ಹೆಚ್ಚಾಗಬಹುದು ಎಂದು ಬಿಸಿಸಿಐ ತಿಳಿಸಿದೆ.

ಈ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿರುವ ಬಿಸಿಸಿಐ ಆಂಟಿ ಕರಪ್ಷನ್ ಯೂನಿಟ್ (ಎಸಿಯು) ಈಗಾಗಲೇ ನಿಗಾವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಿದೆ. ಆಟಗಾರರ ಸಂಪರ್ಕಗಳು, ಹೋಟೆಲ್ ಚಟುವಟಿಕೆಗಳು ಹಾಗೂ ಅನುಮಾನಾಸ್ಪದ ವ್ಯಕ್ತಿಗಳ ಚಲನವಲನಗಳ ಮೇಲೆ ಎಸಿಯು ಅಧಿಕಾರಿಗಳು ಕಣ್ಣಿಟ್ಟಿದ್ದಾರೆ ಎಂದು ತಿಳಿದುಬಂದಿದೆ. ಅಗತ್ಯವಿದ್ದರೆ ಹೆಚ್ಚುವರಿ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸುವ ಸಾಧ್ಯತೆಯೂ ಇದೆ ಎನ್ನಲಾಗಿದೆ.

ಐಪಿಎಲ್ ವಿಶ್ವದ ಅತ್ಯಂತ ಜನಪ್ರಿಯ ಕ್ರಿಕೆಟ್ ಲೀಗ್‌ಗಳಲ್ಲಿ ಒಂದಾಗಿದ್ದು, ಭಾರತದ ಕ್ರಿಕೆಟ್ ಪ್ರತಿಷ್ಠೆಯ ಪ್ರತೀಕವಾಗಿ ಪರಿಗಣಿಸಲಾಗುತ್ತದೆ. ಇಂತಹ ಟೂರ್ನಿಯಲ್ಲಿ ಯಾವುದೇ ರೀತಿಯ ಫಿಕ್ಸಿಂಗ್, ಭ್ರಷ್ಟಾಚಾರ ಅಥವಾ ಹನಿಟ್ರಾಪ್ ಘಟನೆಗಳು ನಡೆಯುವುದರಿಂದ ಆಟಗಾರರ ಭವಿಷ್ಯ ಮಾತ್ರವಲ್ಲ, ಅಭಿಮಾನಿಗಳ ನಂಬಿಕೆಯ ಮೇಲೂ ದೊಡ್ಡ ಪರಿಣಾಮ ಬೀಳಬಹುದು ಎಂಬ ಆತಂಕ ಬಿಸಿಸಿಐಗೆ ಇದೆ.

ಈ ಹಿನ್ನೆಲೆಯಲ್ಲಿ ಯುವ ಆಟಗಾರರು ಹಾಗೂ ಹೊಸದಾಗಿ ಐಪಿ–ಎಲ್‌ಗೆ ಪ್ರವೇಶಿಸಿರುವ ಕ್ರಿಕೆಟಿಗರಿಗೆ ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುವ ಬಗ್ಗೆ ಕೂಡ ಚಿಂತನೆ ನಡೆದಿದೆ ಎಂದು ಮೂಲಗಳು ತಿಳಿಸಿವೆ. ಭದ್ರತಾ ನಿಯಮಗಳನ್ನು ಉಲ್ಲಂಘಿಸಿದರೆ ಆಟಗಾರರ ವಿರುದ್ಧ ಕಠಿಣ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಬಿಸಿಸಿಐ ಎಚ್ಚರಿಕೆ ನೀಡಿದೆ.

# ಡಾಕ್ಟರ್ ಬಳಿಕ ನರ್ಸ್ ನೇಣಿಗೆ ಶರಣು: ಅಕ್ರಮ ಸಂಬಂಧ ಶಂಕೆಯಲ್ಲಿ ತನಿಖೆ





**ರಾಮನಗರ:** ಕನಕಪುರ ನಗರದಲ್ಲಿ ಎರಡು ದಿನಗಳ ಅಂತರದಲ್ಲಿ ನಡೆದ ಇಬ್ಬರ ಆತ್ಮಹತ್ಯೆ ಪ್ರಕರಣಗಳು ಹಲವು ಅನುಮಾನಗಳಿಗೆ ಕಾರಣವಾಗಿದ್ದು, ಸ್ಥಳೀಯರಲ್ಲಿ ಆತಂಕ ಮತ್ತು ಚರ್ಚೆಗೆ ಗ್ರಾಸವಾಗಿವೆ. ಖಾಸಗಿ ಆಸ್ಪತ್ರೆಯ ವೈದ್ಯರ ಆತ್ಮಹತ್ಯೆಯ ಬೆನ್ನಲ್ಲೇ ಅದೇ ಆಸ್ಪತ್ರೆಯಲ್ಲಿ ಹಲವು ವರ್ಷಗಳಿಂದ ಕೆಲಸ ಮಾಡುತ್ತಿದ್ದ ನರ್ಸ್ ಸಹ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಇದೀಗ ಹೊಸ ತಿರುವು ಪಡೆದುಕೊಂಡಿದೆ. ಈ ಎರಡು ಸಾವುಗಳ ನಡುವಿನ ಸಂಬಂಧದ ಬಗ್ಗೆ ಹಲವು ಪ್ರಶ್ನೆಗಳು ಉದ್ಭವವಾಗಿದ್ದು, ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಆರಂಭಿಸಿದ್ದಾರೆ.

ಕನಕಪುರ ನಗರದ ಮಹದೇಶ್ವರ ಬಡಾವಣೆಯಲ್ಲಿ ಈ ಘಟನೆ ನಡೆದಿದ್ದು, ಮೃತ ನರ್ಸ್ ಅನ್ನು ಸರಸ್ವತಿ (45) ಎಂದು ಗುರುತಿಸಲಾಗಿದೆ. ಅವರು ಕನಕಪುರದ ನವೋದಯ ಆಸ್ಪತ್ರೆಯಲ್ಲಿ ಹಲವು ವರ್ಷಗಳಿಂದ ನರ್ಸ್ ಆಗಿ ಕೆಲಸ ಮಾಡುತ್ತಿದ್ದರು ಎಂದು ತಿಳಿದುಬಂದಿದೆ. ಅದೇ ಆಸ್ಪತ್ರೆಯ ವೈದ್ಯರಾಗಿದ್ದ ಡಾ. ಚೇತನ್ ಟೆಂಕರ್ ಅವರು ಎರಡು ದಿನಗಳ ಹಿಂದೆ ಆತ್ಮಹತ್ಯೆ ಮಾಡಿಕೊಂಡಿದ್ದರು. ಇದೀಗ ವೈದ್ಯರ ಸಾವಿನ ಬೆನ್ನಲ್ಲೇ ನರ್ಸ್ ಸಹ ಆತ್ಮಹತ್ಯೆಗೆ ಶರಣಾಗಿರುವುದು ಪ್ರಕರಣವನ್ನು ಮತ್ತಷ್ಟು ಅನುಮಾನಾಸ್ಪದವಾಗಿಸಿದೆ.

ಮಾಹಿತಿಯ ಪ್ರಕಾರ, ಡಾ. ಚೇತನ್ ಟೆಂಕರ್ ಅವರು ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದರು ಎನ್ನಲಾಗಿದೆ. ಮೊನ್ನೆ ರಾತ್ರಿ ಮನೆಯಲ್ಲಿ ಜಗಳ ನಡೆದ ನಂತರ ಅವರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ಕುಟುಂಬದವರು ಪೊಲೀಸರಿಗೆ ಮಾಹಿತಿ ನೀಡಿದ್ದರು. ಈ ಘಟನೆ ಕನಕಪುರ ನಗರದಲ್ಲಿ ಭಾರೀ ಚರ್ಚೆಗೆ ಕಾರಣವಾಗಿತ್ತು. ಖಾಸಗಿ ಆಸ್ಪತ್ರೆಯಲ್ಲಿ ಜನಪ್ರಿಯ ವೈದ್ಯರಾಗಿದ್ದ ಅವರು ಆಕಸ್ಮಿಕವಾಗಿ ಆತ್ಮಹತ್ಯೆ ಮಾಡಿಕೊಂಡಿರುವುದು ಹಲವರಿಗೆ ಆಘಾತ ಉಂಟುಮಾಡಿತ್ತು.

ಈ ಘಟನೆ ನಡೆದ ಎರಡು ದಿನಗಳಲ್ಲೇ ನವೋದಯ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದ ನರ್ಸ್ ಸರಸ್ವತಿ ಕೂಡ ಆತ್ಮಹತ್ಯೆ ಮಾಡಿಕೊಂಡಿರುವುದು ಪ್ರಕರಣಕ್ಕೆ ಹೊಸ ತಿರುವು ನೀಡಿದೆ. ಮಹದೇಶ್ವರ ಬಡಾವಣೆಯ ಮನೆಯಲ್ಲಿ ಅವರು ನೇಣು ಬಿಗಿದುಕೊಂಡ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಕುಟುಂಬದವರು ಹಾಗೂ ಸ್ಥಳೀಯರು ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ವೈದ್ಯ ಮತ್ತು ನರ್ಸ್ ಆತ್ಮಹತ್ಯೆಗಳ ನಡುವಿನ ಸಂಬಂಧದ ಬಗ್ಗೆ ಇದೀಗ ಹಲವಾರು ಅನುಮಾನಗಳು ವ್ಯಕ್ತವಾಗುತ್ತಿವೆ. ಡಾ. ಚೇತನ್ ಟೆಂಕರ್ ಹಾಗೂ ನರ್ಸ್ ಸರಸ್ವತಿ ನಡುವೆ ಆಪ್ತ ಸಂಪರ್ಕವಿತ್ತು ಎನ್ನುವ ಮಾತುಗಳು ಸ್ಥಳೀಯ ವಲಯದಲ್ಲಿ ಕೇಳಿಬರುತ್ತಿವೆ. ಕೆಲವರು ಇವರಿಬ್ಬರ ನಡುವೆ ಅಕ್ರಮ ಸಂಬಂಧವಿತ್ತು ಎಂಬ ಅನುಮಾನ ವ್ಯಕ್ತಪಡಿಸುತ್ತಿದ್ದು, ಈ ಕೋನದಲ್ಲಿಯೂ ಪೊಲೀಸರು ತನಿಖೆ ನಡೆಸುತ್ತಿದ್ದಾರೆ ಎನ್ನಲಾಗಿದೆ. ಆದರೆ ಈ ಕುರಿತು ಪೊಲೀಸರು ಯಾವುದೇ ಅಧಿಕೃತ ಮಾಹಿತಿ ನೀಡಿಲ್ಲ.

ಪೊಲೀಸರ ಪ್ರಕಾರ, ನರ್ಸ್ ಸರಸ್ವತಿ ಹಲವು ವರ್ಷಗಳಿಂದ ಅದೇ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿದ್ದರು. ವೈದ್ಯರ ಆತ್ಮಹತ್ಯೆ ಪ್ರಕರಣದ ಬಳಿಕ ಅವರು ಮಾನಸಿಕವಾಗಿ ಕುಗ್ಗಿದ್ದರು ಎಂಬ ಮಾಹಿತಿ ಕೂಡ ಲಭ್ಯವಾಗಿದೆ. ವೈದ್ಯರ ಸಾವಿನಿಂದ ಆಘಾತಕ್ಕೊಳಗಾಗಿ ಆತ್ಮಹತ್ಯೆ ಮಾಡಿಕೊಂಡರಾ? ಅಥವಾ ಬೇರೆ ಯಾವುದಾದರೂ ವೈಯಕ್ತಿಕ ಕಾರಣ ದೆಯೇ? ಎಂಬುದರ ಕುರಿತು ತನಿಖೆ ಮುಂದುವರಿದಿದೆ.

ಈ ಎರಡು ಘಟನೆಗಳು ಕನಕಪುರ ನಗರದಲ್ಲಿ ಸಾಕಷ್ಟು ಕುತೂಹಲ ಹಾಗೂ ಅನುಮಾನಗಳಿಗೆ ಕಾರಣವಾಗಿವೆ. ಒಂದೇ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದ ಇಬ್ಬರು ಅಲ್ಪ ದಿನಗಳ ಅಂತರದಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವುದು ಸಾಮಾನ್ಯ ಘಟನೆ ಅಲ್ಲ ಎಂದು ಸ್ಥಳೀಯರು ಮಾತನಾಡಿಕೊಳ್ಳುತ್ತಿದ್ದಾರೆ. ಆಸ್ಪತ್ರೆ ಸಿಬ್ಬಂದಿ, ಕುಟುಂಬದವರು ಹಾಗೂ ಆಪ್ತರಿಂದ ಪೊಲೀಸರು ಮಾಹಿತಿ ಸಂಗ್ರಹಿಸುತ್ತಿದ್ದಾರೆ.

ಈ ಸಂಬಂಧ ಕನಕಪುರ ಟೌನ್ ಪೊಲೀಸ್ ಠಾಣೆಯಲ್ಲಿ ಅಸಹಜ ಸಾವು ಪ್ರಕರಣ ದಾಖಲಾಗಿದ್ದು, ಎರಡೂ ಪ್ರಕರಣಗಳ ನಡುವಿನ ಸಂಬಂಧದ ಬಗ್ಗೆ ಪೊಲೀಸರು ಸೂಕ್ಷ್ಮ ತನಿಖೆ ನಡೆಸುತ್ತಿದ್ದಾರೆ. ಮೊಬೈಲ್ ಕರೆ ವಿವರಗಳು, ವೈಯಕ್ತಿಕ ಸಂಬಂಧಗಳು ಹಾಗೂ ಆತ್ಮಹತ್ಯೆಗೆ ಕಾರಣವಾಗಿರಬಹುದಾದ ಇತರ ಅಂಶಗಳ ಕುರಿತು ಪರಿಶೀಲನೆ ನಡೆಯುತ್ತಿದೆ ಎಂದು ತಿಳಿದುಬಂದಿದೆ.

ವೈದ್ಯರ ಆತ್ಮಹತ್ಯೆಯ ಆಘಾತ ಕಡಿಮೆಯಾಗುವ ಮುನ್ನವೇ ನರ್ಸ್ ಸಹ ನೇಣಿಗೆ ಶರಣಾಗಿರುವುದು ಕನಕಪುರದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ. ಈ ಎರಡೂ ಸಾವಿನ ಹಿಂದೆ ಇರುವ ನಿಜವಾದ ಕಾರಣ ಏನು ಎಂಬುದನ್ನು ಪತ್ತೆಹಚ್ಚಲು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ತ್ರಿಷಾ ರಾಜಕೀಯ ಪ್ರವೇಶಕ್ಕೆ ವೇದಿಕೆ ಸಿದ್ಧ? ಟಿವಿಕೆ ವಲಯದಲ್ಲಿ ಚರ್ಚೆ

**ಚೆನ್ನೈ:** ತಮಿಳುನಾಡು ರಾಜಕೀಯದಲ್ಲಿ ದಳಪತಿ ವಿಜಯ್ ಗೆಲುವು ಸಖತ್ ಕ್ರೇಜ್ ಹುಟ್ಟುಹಾಕಿದೆ. ದಶಕಗಳ ಇತಿಹಾಸ ಹೊಂದಿರುವ ಡಿಎಂಕೆ ಮತ್ತು ಎಐ–ಎಡಿಎಂಕೆಯಂತಹ ಪ್ರಬಲ ಪಕ್ಷಗಳನ್ನು ಹಿಂದಿಕ್ಕಿ ಗೆಲುವಿನ ಪತಾಕೆ ಹಾರಿಸಿದ್ದಾಗಿದೆ. ಈ ರಾಜಕೀಯ ವಿಜಯೋತ್ಸವದ ಸಮಯದಲ್ಲಿ ಎಲ್ಲರ ಗಮನ ಸೆಳೆಯುತ್ತಿರುವ ಮತ್ತೊಂದು ಹೆಸರು 'ತ್ರಿಷಾ'.

ಹೌದು, ವಿಜಯ್ ಯಶಸ್ಸಿನ ಬೆನ್ನಲ್ಲೇ ನಾಯಕಿ ತ್ರಿಷಾ ಸ್ವತಃ ಅವರ ಮನೆಗೆ ಭೇಟಿ ನೀಡಿ ಅಭಿನಂದಿಸಿದ್ದು, ಈಗ ಸೋಷಿಯಲ್ ಮೀಡಿಯಾದಲ್ಲಿ ಹಲ್‌ಚಲ್ ಎಬ್ಬಿಸಿದೆ. ಇದು ಕೇವಲ ಅಭಿನಂದನೆಗಳಿಗೆ ಸೀಮಿತವಾಗಿಲ್ಲ, ಇದರ ಹಿಂದೆ ದೊಡ್ಡ ರಾಜಕೀಯ ಸಮೀಕರಣವಿದೆ ಎಂಬ ಮಾತುಗಳು ಕೇಳಿಬರುತ್ತಿದೆ. ಅತ್ಯಂತ ಕುತೂಹಲಕಾರಿ ಸುದ್ದಿಯೆಂದರೆ ತ್ರಿಷಾ ಶೀಘ್ರದಲ್ಲೇ ರಾಜಕೀಯ ಪ್ರವೇಶಿಸಲಿದ್ದಾರೆ. ವಿಜಯ್ ಸಂಪುಟದಲ್ಲಿ ಅವರಿಗೆ ಪ್ರಮುಖ ಸ್ಥಾನ ಸಿಗಲಿದೆ. ಒಂದು ಹಂತದಲ್ಲಿ ತ್ರಿಷಾ ತಮಿಳುನಾಡಿನ 'ಉಪ ಮುಖ್ಯಮಂತ್ರಿ' ಆಗಲಿದ್ದಾರೆ ಎಂಬ ಊಹಾಪೋಹಗಳೂ ಹೆಚ್ಚಾಗಿವೆ.

ಇದನ್ನೂ ಓದಿ: ಲಂಚ ಪಡೆಯುವಾಗ 'ಲೋಕಾ' ಬಲೆಗೆ ಬಿದ್ದ ಸೆಸ್ಕಾಂ ಅಧಿಕಾರಿ



ವಿಜಯ್ ತಿರುಚಿ ಪೂರ್ವ ಮತ್ತು ಪೆರಂಬೂರು ಎಂಬ ಎರಡು ಕ್ಷೇತ್ರಗಳಿಂದ ಸ್ಪರ್ಧಿಸಿದ್ದರು. ಈ ಪೈಕಿ ಒಂದು ಸ್ಥಾನಕ್ಕೆ ವಿಜಯ್ ರಾಜೀನಾಮೆ ನೀಡಬೇಕಾಗುತ್ತದೆ. ಟಿವಿಕೆ ಮೂಲಗಳ ಪ್ರಕಾರ, ವಿಜಯ್ ಅವರಿಂದ ತೆರವಾದ ಸ್ಥಾನದಲ್ಲಿ ತ್ರಿಷಾ ಸ್ಪರ್ಧಿಸುವ ನಿರೀಕ್ಷೆಯಿದೆ. ಅಲ್ಲಿ ಗೆದ್ದ ನಂತರ ಅವರಿಗೆ ಸರ್ಕಾರದಲ್ಲಿ ಪ್ರಮುಖ ಜವಾಬ್ದಾರಿಗಳನ್ನು ನೀಡಲಾಗುವುದು ಎಂಬ ವದಂತಿ ಇದೆ.

ಇನ್ನು, ಚುನಾವಣೆಗೂ ಮುಂಚೆಯೇ, ವಿಜಯ್ ಮತ್ತು ತ್ರಿಷಾ ಬಗ್ಗೆ ವಿವಿಧ ಸುದ್ದಿಗಳು ಸಾಮಾಜಿಕ ಮಾಧ್ಯಮದಲ್ಲಿ ಹರಿದಾಡುತ್ತಿದ್ದವು. ವಿಶೇಷವಾಗಿ ವಿಜಯ್ ತನ್ನ ಪತ್ನಿಗೆ ವಿಚ್ಛೇದನ ನೀಡುತ್ತಿದ್ದಾರೆ ಎಂಬ ವದಂತಿಗಳು ಬಂದಾಗ, ತ್ರಿಷಾ ಹೆಸರು ಜೋರಾಗಿ ಕೇಳಿಬಂದಿತ್ತು. ಇಬ್ಬರೂ ಒಟ್ಟಿಗೆ ಮದುವೆ ಸಮಾರಂಭದಲ್ಲಿ ಭಾಗವಹಿಸಿದಾಗ ವದಂತಿಗಳು ಇನ್ನಷ್ಟು ಹೆಚ್ಚಾದವು. ಈಗ, ವಿಜಯ್ ಗೆಲುವಿನ ನಂತರ ತ್ರಿಷಾ ಸಕ್ರಿಯವಾಗಿ ಕಾಣಿಸಿಕೊಳ್ಳುವುದು ಆ ಸುದ್ದಿಗಳಿಗೆ ಮತ್ತೆ ಬಲ ತುಂಬುತ್ತಿದೆ. ಆದರೆ ವಿಜಯ್ ಹಾಗೂ ತ್ರಿಷಾ ಈ ವಿಷಯಗಳಿಗೆ ಅಧಿಕೃತವಾಗಿ ಪ್ರತಿಕ್ರಿಯಿಸಿಲ್ಲ

ತಮಿಳುನಾಡು ರಾಜಕೀಯದಲ್ಲಿ ನಟಿ ತ್ರಿಷಾ ಈಗ ಆಕರ್ಷಣೆಯ ಕೇಂದ್ರಬಿಂದುವಾಗಿದ್ದಾರೆ. ತಮಿಳುನಾಡಿನ ಸಿನಿಮಾ ತಾರೆಯರು ರಾಜಕೀಯ ಪ್ರವೇಶಿಸುವುದು ಹೊಸದೇನಲ್ಲ. ಈ ಹಿಂದೆ ಎಂಜಿಆರ್ ಮತ್ತು ಜಯಲಲಿತಾ ಅವರಂತಹವರು ಬೆಳ್ಳಿ ಪರದೆಯಿಂದ ರಾಜಕೀಯವನ್ನು ಆಳುತ್ತಿದ್ದರು. ಈಗ ವಿಜಯ್ ಅದೇ ಹಾದಿಯಲ್ಲಿದ್ದಾರೆ. ಹಾಗಾದ್ರೆ, ತ್ರಿಷಾ ಬೆಂಬಲಕ್ಕೆ ನಿಲ್ಲುತ್ತಾರಾ? ಅಥವಾ ಇವೆಲ್ಲವೂ ಸಾಮಾಜಿಕ ಮಾಧ್ಯಮಗಳು ಸೃಷ್ಟಿಸಿದ ವದಂತಿಗಳೇ ಎಂಬುದಕ್ಕೆ ಇನ್ನಷ್ಟೇ ಉತ್ತರ ಸಿಗಬೇಕಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near vFloor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.